# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 418 (562) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 11.03.2025 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರವು ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ (BSPL) ಬಾಲ್ಡೋಟಾ ಕಂಪನಿಯ 54 ಸಾವಿರ ಕೋಟಿ ರೂ ವೆಚ್ಚದಲ್ಲಿ 10.05 ದಶಲಕ್ಷ ಟನ್ ಉಕ್ಕು ಉತ್ಪಾದನಾ ಕಾರ್ಖಾನೆಯನ್ನು ನಿರ್ಮಿಸುವ ಪ್ರಸ್ತಾವನೆಗೆ ಸರ್ಕಾರವು ಅನುಮತಿ ನೀಡಲಾಗಿದೆಯೇ (ವಿವರ ಒದಗಿಸುವುದು) | ದಿನಾಂಕ 12.02.2025 ರಿಂದ 14.02.2025ರವರೆಗೆ ನಡೆದ "ಇನ್‌ವೆಸ್ಟ್ ಕರ್ನಾಟಕ–2025 ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ"ದಲ್ಲಿ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ (BSPL) ಬಾಲ್ಡೋಟಾ ಕಂಪನಿಯ 54 ಸಾವಿರ ಕೋಟಿ ರೂ. ವೆಚ್ಚದಲ್ಲಿ 10.05 ದಶಲಕ್ಷ ಟನ್ ಉಕ್ಕು ಉತ್ಪಾದನಾ ಕಾರ್ಖಾನೆಯನ್ನು ನಿರ್ಮಿಸುವ ಪ್ರಸ್ತಾವನೆಗೆ ಸರ್ಕಾರದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.<br>ಸದರಿ ಯೋಜನೆಗೆ ರಾಜ್ಯ ಉನ್ನತಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಸಭೆಯ ಅನುಮೋದನೆಗಾಗಿ ಇದುವರೆವಿಗೂ ಪ್ರಸ್ತಾವನೆ ಸಲ್ಲಿಕೆಯಾಗಿರುವುದಿಲ್ಲ. |
| ಆ | ಕೊಪ್ಪಳ ನಗರವು ಸೇರಿದಂತೆ ಸುತ್ತಲಿನ ಚಿಕ್ಕಬಗನಾಳ, ಕಾಸನಕಂಡಿ, ಹಾಲವರ್ತಿ, ಕುಣಿಕೇರಿ ಕರಿಹಳ್ಳಿ, ಹಾಟಿ ಇನ್ನೂ ಹಲವು ಗ್ರಾಮಗಳ ಜನರು ಈಗಾಗಲೇ ಪ್ರಸ್ತುತ ಇರುವ ಕಾರ್ಖಾನೆಗಳು ವೈಜ್ಞಾನಿಕವಾಗಿ ಬೇರ್ಪಡಿಸದೆ ಹೊರ ಬಿಡುತ್ತಿರುವ ಕಾರ್ಖಾನೆಯ ದೂಳು ಗ್ರಾಮಗಳಿಗೆ ಮತ್ತು ಮನೆಯೊಳಗೆ ನುಗ್ಗುತ್ತಿರುವ ಪರಿಣಾಮ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿ ಕೆಮ್ಮು, ದಮ್ಮು, ಟಿ.ಬಿ, ಚರ್ಮ ರೋಗ, ಕ್ಯಾನ್ಸರ್ ನಂತಹ ಕಾಯಿಲೆಗಳಿಂದ ಬಳಲುತ್ತಿರುವುದು ಹಾಗೂ ಕೆಟ್ಟ ದೂಳಿನಿಂದಾಗಿ ಆವರಿಸಿದ ಹುಲ್ಲನ್ನೇ ಜಾನುವಾರುಗಳು ತಿಂದು ಅನಾರೋಗ್ಯಕ್ಕೆ ಈಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಪ್ಪಳ ತಾಲ್ಲೂಕಿನಲ್ಲಿ ವಿವಿಧ ಕೈಗಾರಿಕೆಗಳಿಂದ ಮಾಲಿನ್ಯವಾಗುತ್ತಿರುವ ಬಗ್ಗೆ ಅಧ್ಯಯನ ನಡೆಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಒಂದು ತಂಡವನ್ನು ರಚಿಸಿದ್ದು, ದಿನಾಂಕ 10.12.2024 ಮತ್ತು 12.12.2024 ರಂದು ಕೊಪ್ಪಳ ತಾಲ್ಲೂಕಿನಲ್ಲಿರುವ ವಿವಿಧ ಕೈಗಾರಿಕೆಗಳನ್ನು ಪರಿವೀಕ್ಷಣೆ ಮಾಡಿದ್ದು, ಈ ತಂಡದ ವರದಿಯನ್ನಾಧರಿಸಿ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸಂಬಂಧ ಪಟ್ಟ ಕೈಗಾರಿಕೆಗಳಿಗೆ ನೋಟೀಸ್‌ಅನ್ನು ಜಾರಿ ಮಾಡಲಾಗಿರುತ್ತದೆ. |
| ಇ | ಬಂದಿದ್ದರೆ ಈ ಕಾರ್ಖಾನೆಗಳು ಬಿಡುತ್ತಿರುವ ಹೊಗೆ, ದೂಳು ಹಾಗೂ ಮಾಲಿನ್ಯ ನಿಯಂತ್ರಣಕ್ಕೆ ತೆಗೆದುಕೊಂಡ ಕ್ರಮ ಹಾಗೂ ಕಾರ್ಖಾನೆಗಳ ವಿರುದ್ಧ ಯಾವ ಕ್ರಮಕೈಗೊಳ್ಳಲಾಗುತ್ತಿದೆ? | |

**ಸಿಐ 74 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು